ನಿರಾಶ್ರಿತ ವಿದ್ಯಾರ್ಥಿಗಳಿಗೆ ಖರ್ಚು ಮಾಡುತ್ತಿರುವ ಹಣ

೧೧೭೦. ಶ್ರೀ ಜಿ. ರಾಜೂಗೌಡ.—ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಸಮಾಜ ಕಲ್ಯಾಣ ಸಚಿವರ ಪರವಾಗಿ) ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ನಿರಾಶ್ರಿತ, ವಿದ್ಯಾರ್ಥಿ ನಿಲಯದಲ್ಲಿರುವ ವಿದ್ಯಾರ್ಥಿಗಳಿಗೆ ಒಂದು ತಿಂಗಳಿಗೆ ಒಬ್ಬರಿಗೆ ಎಷ್ಟು ವೆಚ್ಚ ಮಾಡಲಾಗುತ್ತಿದೆ?

ಆ) ಅದೇ ರೀತಿ ಹಿಂದುಳಿದ ಮತ್ತು ಅಲ್ಪ ಸಂಖ್ಯಾತರ ವಿದ್ಯಾರ್ಥಿನಿಲಯದ ಒಬ್ಬ ವಿದ್ಯಾರ್ಥಿಗೆ ಒಂದು ತಿಂಗಳಿಗೆ ಎಷ್ಟು ವೆಚ್ಚ ಮಾಡಲಾಗುತ್ತಿದೆ?

ಶ್ರೀ ಎಂ. ವೀರಪ್ಪ ಮೊಯ್ಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).

ಅ) ಸಮಾಜ ಕಲ್ಯಾಣ ಇಲಾಖಾವತಿಯಿಂದ ನಿರಾಶ್ರಿತ ವಿದ್ಯಾರ್ಥಿನಿಲಯಗಳು ನಡೆಸುತ್ತಿಲ್ಲ.

ಆ) ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯು ನಡೆಸುತ್ತಿರುವ ೨ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಒಂದು ತಿಂಗಳಿಗೆ ಒಬ್ಬರಿಗೆ ರೂ. ೮೦-೦೦ ಗಳನ್ನು ವೆಚ್ಚ ಮಾಡಲಾಗುತ್ತಿದೆ.

ಪರಿಶಿಷ್ಟ ಜಾತಿ ಜನಾಂಗಕ್ಕೆ ಕಾನೂನು ಸಲಹೆಗಾರರ ಪುನರ್ ನೇಮಕಕ್ಕೆ ಒತ್ತಾಯ

೧೧೭೬. ಬಿ. ಹೆಚ್. ಲಕ್ಷ್ಮಣಯ್ಯ (ಬೇಲೂರು).—ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಸಮಾಜ ಕಲ್ಯಾಣ ಸಚಿವರ ಪರವಾಗಿ) ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಹಿಂದೆ ಇಲಾಖಾವತಿಯಿಂದ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಉಚಿತ ಕಾನೂನು ನೆರವು ನೀಡಲು ಸರ್ಕಾರವು ಜಿಲ್ಲೆಗೊಬ್ಬರಂತೆ ಕಾನೂನು ಸಲಹೆಗಾರರನ್ನು ನೇಮಿಸಿದ್ದು ನಿಜವೇ?

ಆ) ೧೯೮೬ರಲ್ಲಿ ಈ ಹುದ್ದೆ ರದ್ದುಗೊಂಡಿದ್ದು, ಈ ಜನಾಂಗಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈಗಿನ ಉಚಿತ ಕಾನೂನು ನೆರವು ಮಂಡಳಿಗಳಿಂದ ಈ ವರ್ಗದ ಜನರಿಗೆ ಸಮರ್ಥ ರೀತಿಯಲ್ಲಿ ನೆರವು ದೊರಕದಿರುವುದು ನಿಜವೇ?

ಈ) ಹಾಗಿದ್ದಲ್ಲಿ, ಈ ಹಿಂದಿನಂತೆ ಜಿಲ್ಲಾ ಕಾನೂನು ಸಲಹೆಗಾರರನ್ನು ಪುನರ್ ನೇಮಕ ಮಾಡುವ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಂ. ವೀರಪ್ಪ ಮೊಯ್ಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).

ಅ) ಹೌದು.

ಆ) ಇಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಹಾಸನದಲ್ಲಿ ರೇಷ್ಮೆ ಬಟ್ಟೆ ಕೈಗಾರಿಕೆ

೧೧೯೫. ಶ್ರೀ ಕೆ. ಹೆಚ್. ಹನುಮೇಗೌಡ (ಹಾಸನ).—ಮಾನ್ಯ ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಹಾಸನ ಜಿಲ್ಲೆಯಲ್ಲಿ ಎಷ್ಟು ಎಕರೆಗಳಲ್ಲಿ ರೇಷ್ಮೆ ಬೆಳೆಯಾಗುತ್ತದೆ;

ಆ) ರೇಷ್ಮೆ ಬೆಳೆಯಿಂದ ಕಳೆದ ಮೂರು ವರ್ಷಗಳಿಂದ ವರ್ಷವೊಂದಕ್ಕೆ ಎಷ್ಟು ರೇಷ್ಮೆ ಗೂಡು ಉತ್ಪತ್ತಿಯಾಗುತ್ತದೆ (ವಿವರ ಒದಗಿಸುವುದು)